ದಿ:19/08/2025ರಂದು 55
SLWC-74
1561-76-24

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಹೇಳಿಕೆ.**

**ಪ್ರಶ್ನೆ:-**

ಬೆಂಗಳೂರಿನಲ್ಲಿ ಸರ್ಕಾರದಿಂದ ನಿಜಶರಣ ಅಂಬಿಗರ ಚೌಡಯ್ಯ ಪ್ರತಿಮೆಯನ್ನು ಚಾಲುಕ್ಯ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಯ ಪಕ್ಕದಲ್ಲಿರುವ ಜವಹಾರ್ ಲಾಲ್ ನೆಹರೂ ಪ್ಲಾನಿಟೋರಿಯಂಗೆ ಹೊಂದಿಕೊಂಡಿರುವ ಜಾಗದಲ್ಲಿ ಸ್ಥಾಪಿಸುವಂತೆ ಒತ್ತಾಯಿಸಿ, ನಿಯಮ-72ರ ಅಡಿಯಲ್ಲಿ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ :-**

ಹನ್ನೆರಡನೇ ಶತಮಾನದ ಸಾಮಾಜಿಕ, ಕ್ರಾಂತಿಯ ಹರಿಕಾರರಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಒಬ್ಬರು. ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವದ ಅಂಬಿಗರ ಚೌಡಯ್ಯನವರು ನೇರ ನಿರ್ಭೀತ ನುಡಿಗಳಿಗೆ ಪ್ರಸಿದ್ಧರು. ಅಂಬಿಗರ ಚೌಡಯ್ಯ ಎಂಬ ಅಂಕಿತನಾಮದಿಂದಲೇ ವಚನಗಳನ್ನು ರಚಿಸಿರುತ್ತಾರೆ.

ಚಾಲುಕ್ಯ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಯ ಪಕ್ಕದಲ್ಲಿರುವ ಜವಹಾರ್ ಲಾಲ್ ನೆಹರೂ ಪ್ಲಾನಿಟೋರಿಯಂಗೆ ಹೊಂದಿಕೊಂಡಿರುವ ಜಾಗದಲ್ಲಿ ವಿಶ್ವಗುರು ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆಗೆ ಸಂಬಂಧಿಸಿದಂತೆ,

ಸರ್ಕಾರದ ಸುತ್ತೋಲೆ ಸಂಖ್ಯೆ ಕಸಂವಾಪ್ರ 564 ಕಸಧ 2012 ದಿ:11.06.2012ರಲ್ಲಿ, ಸರ್ಕಾರದ/ ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಯನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿದೆ.

ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾದ SLP(C) ಸಂಖ್ಯೆ 8519/2006ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:18-01-2013ರಂದು ನೀಡಿರುವ ತೀರ್ಪಿನಲ್ಲಿರುವ ಒಂದು ಅಂಶವು ಈ ಕೆಳಕಂಡಂತೆ ಇರುತ್ತದೆ.

> " ........ State Government shall not grant any permission for installation of any statue or construction of any structure in public roads, pavements, sideways and other public utility places".
>
> "......... ರಾಜ್ಯ ಸರ್ಕಾರವು ಸಾರ್ವಜನಿಕ ರಸ್ತೆ, ರಸ್ತೆಬದಿಯ ಸ್ಥಳಗಳು ಹಾಗೂ ಸಾರ್ವಜನಿಕ ಉಪಯುಕ್ತ ಸ್ಥಳಗಳಲ್ಲಿ ಪ್ರತಿಮೆಗಳ ಸ್ಥಾಪನೆ ಅಥವಾ ಯಾವುದೇ ರಚನೆಗಳ ನಿರ್ಮಾಣಕ್ಕೆ ಅನುಮತಿಯನ್ನು ನೀಡತಕ್ಕದ್ದಲ್ಲ........"

ಮೇಲ್ಕಂಡ ಸರ್ಕಾರದ ಸುತ್ತೋಲೆ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಯಲದ ತೀರ್ಪಿನನ್ವಯ ಸಾರ್ವಜನಿಕ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆಗೆ ಅವಕಾಶವಿರುವುದಿಲ್ಲ.

ಸುಮಾರು 160 ಕ್ಕಿಂತ ಹೆಚ್ಚು ಶಿವಶರಣರು ಜನಸಾಮಾನ್ಯರ ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಸಮಾಜ ಸುಧಾರಣೆಗೆ ಶ್ರಮಿಸಿರುತ್ತಾರೆ. ಹಲವಾರು ಶಿವಶರಣರ ಪ್ರತಿಮೆಯನ್ನು ಸ್ಥಾಪಿಸುವುದು ಕಷ್ಟಸಾಧ್ಯವಾಗಿರುತ್ತದೆ. ಆದ್ದರಿಂದ ಈ ಮಹಾನ್ ಚೇತನಗಳ ಶಿವಶರಣರ ಹೆಸರುಗಳನ್ನು ಒಂದೇ ಶಿಲೆಯಲ್ಲಿ ಕೆತ್ತಿಸಿ ಶಿಲಾಶಾಸನ ಮಾದರಿಯಲ್ಲಿ ಸ್ಥಾಪಿಸುವ ಕುರಿತು ಪರಿಶೀಲಿಸಲಾಗುವುದು.

ಕಸಂವಾ 56 ಕವಿಸ 2025.

(ಶಿವರಾಜ್ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖಾ